**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ. ಸಂಖ್ಯೆ : 1767/2024**

ಪಿರ್ಯಾದಿ : ರಾಜ್ಯ, ಪರವಾಗಿ ಮೂಡಿಗೆರೆ ಅಬಕಾರಿ ಪೊಲೀಸ್ ಠಾಣೆ, ಮೂಡಿಗೆರೆ.

ವಿರುದ್ಧ

ಆರೋಪಿ : ಸಂದೀಪ.ಎಂ.ವಿ,
ವಯಸ್ಸು ಸುಮಾರು 28 ವರ್ಷ,
ಬಿನ್ ವೆಂಕಟೇಶ.ಎಂ.ಎಂ,
ವಾಸಃ ಮಾಲಹಳ್ಳಿ ಗ್ರಾಮ, ಬಸ್ಕಲ್,
ಚಿಕ್ಕಮಗಳೂರು ತಾಲ್ಲೂಕು.

**ದೋಷಾರೋಪಣೆ**

ಶ್ರೀ. ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 17.04.2024 ರಂದು ರಾತ್ರಿ 9.00 ರ ಸಮಯದಲ್ಲಿ ಮೂಡಿಗೆರೆ ಅಬಕಾರಿ ಪೊಲೀಸ್ ಠಾಣಾ ವ್ಯಾಪ್ತಿಯ ಮೂಡಿಗೆರೆ ಪಟ್ಟಣದ ಕೆ.ಎಂ ರಸ್ತೆಯ ಗಂಗನವಕ್ಕಿ ಸಮೀಪ ಹೆಚ್.ಪಿ ಪೆಟ್ರೋಲ್ ಪಂಪ್ ಮುಂದೆ ರಸ್ತೆಯ ಬದಿಯಲ್ಲಿ ಆರೋಪಿಯಾದ ನೀವು ನಿಮಗೆ ಸೇರಿದ ವಾಹನ ನೋಂದಣಿ ಸಂಖ್ಯೆಃಕೆಎ-05-ಎಂಎ-4589 ನೇ ಮಾರುತಿ ಸುಜುಕಿ ಕಂಪನಿಯ 800 ಕಾರಿನಲ್ಲಿ ಅಕ್ರಮವಾಗಿ ಲಾಭಗಳಿಸುವ ಉದ್ದೇಶದಿಂದ ಯಾವುದೇ ಪರವಾನಗಿ ಇಲ್ಲದೇ ಕಾನೂನು ಬಾಹಿರವಾಗಿ 90 ಎಂ.ಎಲ್ ನ 96 ಡಿ.ಕೆ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್‌ಗಳನ್ನು ಮತ್ತು 90 ಎಂ.ಎಲ್ ನ 96 ಕ್ಯಾಪ್ಟನ್ ಮಾರ್ಟೀನ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್‌ಗಳನ್ನು ಮಾರಾಟ ಮಾಡುವ ಉದ್ದೇಶದಿಂದ ಸಾಗಾಟ ಮಾಡುತ್ತಿದ್ದಾಗ ಪೊಲೀಸರು ನಡೆಸಿದ ದಾಳಿ ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **32** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು 90 ಎಂ.ಎಲ್ ನ 96 ಡಿ.ಕೆ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್‌ಗಳನ್ನು ಮತ್ತು 90 ಎಂ.ಎಲ್ ನ 96 ಕ್ಯಾಪ್ಟನ್ ಮಾರ್ಟೀನ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್‌ಗಳನ್ನು ನಿಮ್ಮ ವಾಹನ ನೋಂದಣಿ

ಸಂಖ್ಯೆಃಕೆಎ-05-ಎಂಎ-4589 ನೇ ಮಾರುತಿ ಸುಜುಕಿ ಕಂಪನಿಯ 800 ಕಾರಿನಲ್ಲಿ ಅಕ್ರಮವಾಗಿ ಸಂಗ್ರಹಿಸಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **38** ಎ ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ*?*

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

*(ಆರೋಪಿಗೆ ದಿನಾಂಕ 25.02.2025 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)*

**Sd/-**

ಮೂಡಿಗೆರೆ
ದಿನಾಂಕಃ 25.02.2025

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ ಮೂಡಿಗೆರೆ.